6 ● RF(A)/100/3345

ಒಟ್ಟು ಮುದ್ರಿತ ಪುಟಗಳ ಸಂಖ್ಯೆ : 12 ]
Total No. of Printed Pages : 12 ]
ಒಟ್ಟು ಪ್ರಶ್ನೆಗಳ ಸಂಖ್ಯೆ : 38 ]
Total No. of Questions : 38 ]

**ಸಂಕೇತ ಸಂಖ್ಯೆ : 62-K**

**Code No. : 62-K**

**A**

**CCE RF**
**UNREVISED**
**FULL SYLLABUS**

**Question Paper Serial No. 100**

# ವಿಷಯ : ತೃತೀಯ ಭಾಷೆ — ಕನ್ನಡ

# Subject : Third Language — KANNADA

**(ಶಾಲಾ ಅಭ್ಯರ್ಥಿ / Regular Fresh)**

ದಿನಾಂಕ : 12. 04. 2023 ] [ Date : 12. 04. 2023

ಸಮಯ : ಬೆಳಗ್ಗೆ 10-30 ರಿಂದ ಮಧ್ಯಾಹ್ನ 1-30 ರವರೆಗೆ ] [ Time : 10-30 A.M. to 1-30 P.M.

ಗರಿಷ್ಠ ಅಂಕಗಳು : 80 ] [ Max. Marks : 80

***ಪರೀಕ್ಷಾರ್ಥಿಗಾಗಿ ಸಾಮಾನ್ಯ ಸೂಚನೆಗಳು :***

1. ಈ ಪ್ರಶ್ನೆಪತ್ರಿಕೆಯು ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಒಟ್ಟು 38 ಪ್ರಶ್ನೆಗಳನ್ನು ಹೊಂದಿದೆ.

2. ಈ ಪ್ರಶ್ನೆಪತ್ರಿಕೆಯನ್ನು ಹಿಮ್ಮುಖ ಜಾಕೆಟ್ ಮೂಲಕ ಮೊಹರು (ಸೀಲ್) ಮಾಡಲಾಗಿದೆ. ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕೆ ನಿಮ್ಮ ಪ್ರಶ್ನೆಪತ್ರಿಕೆಯ ಬಲಬದಿ ಪಾರ್ಶ್ವವನ್ನು ಕತ್ತರಿಸಿ, ಪ್ರಶ್ನೆಪತ್ರಿಕೆಯಲ್ಲಿ ಎಲ್ಲಾ ಪುಟಗಳು ಇವೆಯೇ ಎಂದು ಪರೀಕ್ಷಿಸಿಕೊಳ್ಳಿ.

3. ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.

4. ಬಲ ಭಾಗದಲ್ಲಿ ಕೊಟ್ಟಿರುವ ಅಂಕಿಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ತೋರಿಸುತ್ತವೆ.

5. ಪ್ರಶ್ನೆಪತ್ರಿಕೆಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವು ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ನೀಡಲಾಗಿದೆ.

[ Turn over

ಇಲ್ಲಿಂದ ಕತ್ತರಿಸಿ

**TEAR HERE TO OPEN THE QUESTION PAPER**
**ಪ್ರಶ್ನೆಪತ್ರಿಕೆಯನ್ನು ತೆರೆಯಲು ಇಲ್ಲಿ ಕತ್ತರಿಸಿ**

**Tear here**

**I. ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಹೆಚ್ಚು ಸೂಕ್ತವಾದ ಉತ್ತರವನ್ನು ಆರಿಸಿ, ಅದರ ಕ್ರಮಾಕ್ಷರದೊಂದಿಗೆ ಬರೆಯಿರಿ : 8 × 1 = 8**

1. ಕನ್ನಡ ವರ್ಣಮಾಲೆಯಲ್ಲಿರುವ ಅಕ್ಷರಗಳ ಸಂಖ್ಯೆ

(ಎ) ೧೩

(ಬಿ) ೨೫

(ಸಿ) ೯

(ಡಿ) ೪೯

2. 'ಗೌರಿಯ ಮುಖ ಕಮಲದಂತೆ ಅರಳಿತು' ಈ ವಾಕ್ಯದಲ್ಲಿರುವ ಅಲಂಕಾರ

(ಎ) ಉಪಮಾಲಂಕಾರ

(ಬಿ) ರೂಪಕಾಲಂಕಾರ

(ಸಿ) ದೃಷ್ಟಾಂತಾಲಂಕಾರ

(ಡಿ) ಉತ್ಪ್ರೇಕ್ಷಾಲಂಕಾರ

3. 'ಧರ್ಮ' ಈ ಪದದ ವಿರುದ್ಧಾರ್ಥಕ ರೂಪ

(ಎ) ದಮ್ಮ

(ಬಿ) ಅಧರ್ಮ

(ಸಿ) ದರುಮ

(ಡಿ) ಅದಮ್ಮ

4. ಹರ್ಷ, ಅಚ್ಚರಿ, ಸಂತಸ, ದುಃಖ, ಕೋಪ ಇತ್ಯಾದಿ ಭಾವನೆಗಳನ್ನು ಬರವಣಿಗೆಯಲ್ಲಿ ವ್ಯಕ್ತಪಡಿಸುವ ಸಂದರ್ಭಗಳಲ್ಲಿ ಬಳಸುವ ಲೇಖನ ಚಿಹ್ನೆ

(ಎ) ಭಾವಸೂಚಕ

(ಬಿ) ವಿವರಣಾತ್ಮಕ

(ಸಿ) ಪೂರ್ಣವಿರಾಮ

(ಡಿ) ಅರ್ಧವಿರಾಮ

5. ಮಕ್ಕಳು ಹಾಲನ್ನು ಕುಡಿಯುತ್ತಾರೆ ಮತ್ತು ಹಣ್ಣನ್ನೂ ತಿನ್ನುತ್ತಾರೆ. ಈ ವಾಕ್ಯವು

(ಎ) ಸಾಮಾನ್ಯ ವಾಕ್ಯ

(ಬಿ) ಮಿಶ್ರವಾಕ್ಯ

(ಸಿ) ಸಂಯೋಜಿತ ವಾಕ್ಯ

(ಡಿ) ಅಲಂಕಾರಿಕ ವಾಕ್ಯ

6. ಕೆಳಗಿನವುಗಳಲ್ಲಿ ಸವರ್ಣದೀರ್ಘ ಸಂಧಿಗೆ ಉದಾಹರಣೆಯಾದ ಪದ

(ಎ) ಸುರೇಂದ್ರ

(ಬಿ) ದೀಪಾಲಂಕಾರ

(ಸಿ) ಏಕೈಕ

(ಡಿ) ಅತ್ಯಂತ

7. 'ಪ್ರಾಣಿ' – ಪದದ ಬಹುವಚನ ರೂಪ

(ಎ) ಪಕ್ಷಿ

(ಬಿ) ಪಕ್ಷಿಗಳು

(ಸಿ) ಪ್ರಾಣಿಗಳು

(ಡಿ) ಮೃಗ

8. ಕೆಳಗಿನವುಗಳಲ್ಲಿ ಅನುಕರಣಾವ್ಯಯಕ್ಕೆ ಉದಾಹರಣೆಯಾಗಿರುವ ಪದ

(ಎ) ಬೇಗಬೇಗ

(ಬಿ) ಸರಸರ

(ಸಿ) ರೀತಿ–ನೀತಿ

(ಡಿ) ಕೈಕೊಡು

**II. ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿ ಹೊಂದುವ ಸಂಬಂಧೀ ಪದವನ್ನು ಬರೆಯಿರಿ:** **4 × 1 = 4**

9. ಗುಂಡಪ್ಪನವರ ತಿಮ್ಮ : ಸೂರ್ಯ :: ಬೀಚಿಯವರ ತಿಂಮ : ......................... .

10. ಉಲ್ಲಾಳದ ರಾಣಿ : ಅಬ್ಬಕ್ಕದೇವಿ :: ಕೆಳದಿಯ ರಾಣಿ : ......................... .

11. ಕರದಲಿ : ಜಪಮಣಿ :: ಬಾಯಲಿ : ......................... .

12. ಕಳಸ : ಹಿಂದೂ :: ಶಿಲುಬೆ : ......................... .

**III. ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ : 4 × 1 = 4**

13. ಗೌರಮ್ಮನವರ ಪೂರ್ವಜರು ಯಾವ ಸೀಮೆಯವರು ?

14. ರಸ ಕವಿತ್ವ ಒಂದೇ ಆದರೂ ಅದರ ರಚನೆಗೆ ಬಳಕೆಯಾಗುತ್ತಿರುವ ಛಂದೋ ಪ್ರಕಾರಗಳು ಯಾವವು ?

15. ಬೇರೆಯವರ ಸಾಲಕ್ಕೆ ಯಾವಾಗ ಹೊಣೆಯಾಗಬೇಕೆಂದು ಕವಿ ಸೋಮನಾಥನು ಹೇಳಿದ್ದಾನೆ ?

16. ಧರ್ಮಪದನ ಇನ್ನೊಂದು ಹೆಸರೇನು ?

**IV. ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ : 8 × 2 = 16**

17. ಮಿನಿಪೊಲೀಸ್ ನಗರದ ಪೊಲೀಸರು ಗೊರೂರರನ್ನು ಹೇಗೆ ಉಪಚರಿಸಿದರು ಎಂಬುದನ್ನು ನಿಮ್ಮ ಮಾತುಗಳಲ್ಲಿ ಅಭಿವ್ಯಕ್ತಪಡಿಸಿ.

18. ಶರೀಫರ ಬಾಲ್ಯವು ಹಿಂದೂ ಪರಂಪರೆಯೊಂದಿಗೆ ಹೇಗೆ ಬೆರೆತುಹೋಗಿತ್ತು ?

19. ಗೋವಿಂದಭಟ್ಟರು ಯಾರು ? ಅವರ ಗುಣ ಸ್ವಭಾವಗಳನ್ನು ತಿಳಿಸಿ.

20. ತುಳಜಾಬಾಯಿಯ ದೇಶಪ್ರೇಮ ಮತ್ತು ತ್ಯಾಗವನ್ನು ಕುರಿತು ನಿಮ್ಮ ಮಾತುಗಳಲ್ಲಿ ಬರೆಯಿರಿ.

21. ಶೋಷಣೆಯನ್ನು ವಿರೋಧಿಸುವವರು ಪಡಬೇಕಾದ ಕಷ್ಟ 'ಕಟ್ಟತೇವ ನಾವು' ಕವಿತೆಯಲ್ಲಿ ಹೇಗೆ ಅಭಿವ್ಯಕ್ತಗೊಂಡಿದೆ ?

22. ಆಂಗ್ಲರು ಆಫ್ರಿಕನ್ನರಲ್ಲಿ ಹರಿವ ನೆತ್ತರೊಂದೆ ಎಂದು ನಿಸಾರ್ ಅಹಮದ್ ಅವರು ಹೇಳಿರುವುದರ ಔಚಿತ್ಯವೇನು ?

23. ಗ್ರಂಥಾಲಯವನ್ನು ಹೊಕ್ಕಾಗ ಕವಿಗೆ ಆದ ಅನುಭವವನ್ನು ತಿಳಿಸಿ.

24. ಈರಪ್ಪ ಎಂ. ಕಂಬಳಿಯವರಿಗೆ ತಾವು ಆನೆಯಂಬಾರಿ ಏರಿದಂತೆ ಭಾಸವಾಗಲು ಕಾರಣವೇನು ?

**V. ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭದೊಡನೆ ಸ್ವಾರಸ್ಯವನ್ನು ಬರೆಯಿರಿ : 2 × 3 = 6**

25. "ದೇವಿ ನನ್ನ ಅಪರಾಧವನ್ನು ಕ್ಷಮಿಸು."

26. "ಆಚಾರವೇ ಸ್ವರ್ಗ! ಅನಾಚಾರವೇ ನರಕ."

**VI. ಕೆಳಗಿನ ಪ್ರಶ್ನೆಗಳಿಗೆ ಐದು ಅಥವಾ ಆರು ವಾಕ್ಯಗಳಲ್ಲಿ ಉತ್ತರ ಬರೆಯಿರಿ : 4 × 3 = 12**

27. ಮಿನಿಪೊಲೀಸ್ ನಗರದಲ್ಲಿ ಗೊರೂರರು ತಪ್ಪಿಸಿಕೊಂಡ ಪ್ರಕರಣವನ್ನು ನಿಮ್ಮ ಮಾತುಗಳಲ್ಲಿ ಬರೆಯಿರಿ.

[ Turn over

28. ಕುಲಕರ್ಣಿ ಅವರಿಗೂ ರಾಮಸಿಂಗನಿಗೂ ನಡೆದ ಸಂಭಾಷಣೆಯನ್ನು ಸಂಗ್ರಹಿಸಿ ಬರೆಯಿರಿ.

29. ಸಿ.ಪಿ.ಕೆ.ಯವರು ಗ್ರಂಥಾಲಯದ ಮುಂದೆ ವಿನಮ್ರಭಾವದಿಂದ ನಿಂತ ರೀತಿಯನ್ನು ನೀವು ಹೇಗೆ ಪ್ರಶಂಸಿಸುವಿರಿ ಎಂಬುದನ್ನು ವಿವರಿಸಿ.

30. ಪುರಂದರದಾಸರ ಕೀರ್ತನೆಯಲ್ಲಿ ಡಂಭಾಚಾರದ ಭಕ್ತಿಯ ಸ್ಪಷ್ಟ ಚಿತ್ರಣವು ಹೇಗೆ ಚಿತ್ರಿತವಾಗಿದೆ ?

**VII. ಕೆಳಗಿನ ಕವಿಗಳ / ಸಾಹಿತಿಗಳ ಜನ್ಮಸ್ಥಳ, ಕಾಲ ಮತ್ತು ಕೃತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ : 2 × 3 = 6**

31. ಬೀchi

32. ಸತೀಶ ಕುಲಕರ್ಣಿ

**VIII. ಕೆಳಗೆ ಕೊಟ್ಟಿರುವ ಗಾದೆಮಾತುಗಳಲ್ಲಿ ಯಾವುದಾದರೂ ಒಂದನ್ನು ಆರಿಸಿಕೊಂಡು, ವಿಸ್ತರಿಸಿ ಬರೆಯಿರಿ : 1 × 3 = 3**

33. "ಕುಂಬಾರನಿಗೆ ವರುಷ; ದೊಣ್ಣೆಗೆ ನಿಮಿಷ."

**ಅಥವಾ**

"ದೇಶ ಸುತ್ತು ಕೋಶ ಓದು."

**IX. ಕೆಳಗಿನ ಒಂದು ಪ್ರಶ್ನೆಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ : 1 × 4 = 4**

34. ಗಾಂಧೀಜಿಯವರು ಕೊಡಗಿನಲ್ಲಿ ತಂಗಿದ್ದಾಗ ನಡೆದ ಸಂಗತಿಗಳನ್ನು ವಿವರಿಸಿ.

**ಅಥವಾ**

'ಕೊಡಗಿನ ಗೌರಮ್ಮನವರು ಆ ಕಾಲದ ಮಹಿಳಾ ಸದಭಿರುಚಿಯ ದ್ಯೋತಕವಾಗಿದ್ದರು' ಈ ಹೇಳಿಕೆಯನ್ನು ನಿಮ್ಮ ಮಾತುಗಳಲ್ಲಿ ಸಮರ್ಥಿಸಿ.

**X. ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ : 1 × 4 = 4**

35. ಅಪ್ಪರಿಲ್ಲದೆ ......................................................

..................................................................

...................................................... ಕರುಣೀಸೊ

**ಅಥವಾ**

ಮೂಡಮೋಡ ..................................................

..................................................................

...................................................... ಮುಗಿಲಲ್ಲಿ

**XI. ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ : 1 × 4 = 4**

36. ಮಂದಾಕಿನೀ ಮತ್ತು ಸೋನಗಂಗಾ ಎಂಬ ನದಿಗಳ ಸಂಗಮದಲ್ಲಿ ಸೋನ ಪ್ರಯಾಗ ಎಂಬ ಪುಟ್ಟ ಊರು ಇದೆ. ಇಲ್ಲಿಂದ ಗೌರಿಕುಂಡ ಎಂಬ ಹಳ್ಳಿಗೆ ಹೋಗಿ ಅಲ್ಲಿಂದ ಕೇದಾರ ಪರ್ವತ ಹತ್ತಬೇಕು. ಗೌರಿ ಕುಂಡಕ್ಕೆ 'ಗೋಕುಂಡ' ಎಂಬ ಇನ್ನೊಂದು ಹೆಸರು ಇದೆ. ಕೇದಾರ ಪರ್ವತದ ತಪ್ಪಲಲ್ಲಿ 'ಗೋಮುಖ'ದಿಂದ ಸತತವಾಗಿ ಹಬೆಯಾಡುವ ಬಿಸಿನೀರು ಹರಿದು

ಬಂದು ಕುಂಡದಲ್ಲಿ ಬೀಳುವುದು ಇಲ್ಲಿಯ ವಿಶೇಷತೆ. ಈ ಸ್ಥಳದಲ್ಲಿಯೇ ಪಾರ್ವತಿ ಶಿವನನ್ನು ಪತಿಯಾಗಿ ಪಡೆಯಲು ತಪಸ್ಸು ಮಾಡಿದ್ದಳಂತೆ.

ಗೌರಿಕುಂಡದಿಂದ ಕೇದಾರ ಹದಿನೈದು ಕಿಲೋಮೀಟರ್‌ಗಳ ದಾರಿ. ಕೇದಾರ ಪರ್ವತ ಶ್ರೇಣಿಗಳನ್ನು 'ರುದ್ರಹಿಮಾಲಯ' ಎಂದು ಕರೆಯುತ್ತಾರೆ. ಕೇದಾರ ದೇವಾಲಯ ಬಹುಸುಂದರವಾಗಿದೆ. ಪುರಾಣಗಳ ಪ್ರಕಾರ ವೇದವ್ಯಾಸ ಮಹರ್ಷಿಗಳ ಉಪದೇಶದಂತೆ ಪಾಂಡವರು ಇಲ್ಲಿ ತಪಸ್ಸು ಮಾಡಿ ಈ ದೇವಸ್ಥಾನವನ್ನು ಕಟ್ಟಿದರು. ಹಾಗಾಗಿ ದೇವಸ್ಥಾನದ ಒಳಗೋಡೆಗಳಲ್ಲಿ ಪಾಂಡವರ ವಿಗ್ರಹಗಳನ್ನು ಅಳವಡಿಸಿದ್ದಾರೆ. ಗರ್ಭಗುಡಿಯ ಒಳಗೆ ಕೇದಾರೇಶ್ವರ. ಅದು ಲಿಂಗವೂ ಅಲ್ಲ, ಮೂರ್ತಿಯೂ ಅಲ್ಲ. ಬರೇ ಒಂದು ಒರಟು ಕಲ್ಲಿನ ಬಂಡೆ.

***ಪ್ರಶ್ನೆಗಳು :***

ಎ) ಗೌರಿಕುಂಡಕ್ಕಿರುವ ಇನ್ನೊಂದು ಹೆಸರೇನು ?

ಬಿ) ಕೇದಾರ ದೇವಸ್ಥಾನದ ಒಳಗಡೆ ಪಾಂಡವರ ವಿಗ್ರಹಗಳನ್ನು ಅಳವಡಿಸಲು ಕಾರಣವೇನು ?

ಸಿ) ಸೋನ ಪ್ರಯಾಗ ಎಂಬ ಊರು ಎಲ್ಲಿದೆ ?

ಡಿ) ಕೇದಾರ ಪರ್ವತದ ತಪ್ಪಲಿನ ವಿಶೇಷತೆ ಏನು ?

**XII. ಕೆಳಗಿನ ಯಾವುದಾದರೂ ಒಂದು ವಿಷಯವನ್ನು ಕುರಿತು ಹದಿನೈದು ವಾಕ್ಯಗಳಿಗೆ ಕಡಿಮೆಯಿಲ್ಲದಂತೆ ಪ್ರಬಂಧ ಬರೆಯಿರಿ : 1 × 4 = 4**

37. ಗಣಕಯಂತ್ರ

**ಅಥವಾ**

ಶಾಲೆಗಳಲ್ಲಿ ಕ್ಷೀರಭಾಗ್ಯ ಯೋಜನೆಯ ಮಹತ್ವ

**XIII. ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ :**

**1 × 5 = 5**

38. ನಿಮ್ಮನ್ನು ಬೆಂಗಳೂರಿನ ನಿವಾಸಿ 'ಸ್ವರಾ' ಎಂದು ಭಾವಿಸಿಕೊಂಡು, ಮೈಸೂರಿನಲ್ಲಿರುವ ಚಿಕ್ಕಮ್ಮನವರಿಗೆ ನಿಮ್ಮ ಹುಟ್ಟುಹಬ್ಬಕ್ಕೆ ಆಹ್ವಾನಿಸಿ, ಒಂದು ಪತ್ರವನ್ನು ಬರೆಯಿರಿ.

**ಅಥವಾ**

ನಿಮ್ಮನ್ನು ಧಾರವಾಡದ ನಿವಾಸಿ 'ಪರಮೇಶ್ವರ' ಎಂದು ಭಾವಿಸಿಕೊಂಡು, ನಿಮ್ಮ ಊರಿನಲ್ಲಿ ಶುದ್ಧ ಕುಡಿಯುವ ನೀರಿನ ಘಟಕದ ವ್ಯವಸ್ಥೆ ಮಾಡುವ ಕುರಿತು ಜಿಲ್ಲಾ ಪಂಚಾಯತ್ ಅಧ್ಯಕ್ಷರಿಗೊಂದು ಮನವಿ ಪತ್ರವನ್ನು ಬರೆಯಿರಿ.